ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ : 26ನೇ ಜುಲೈ, 2019

ವಿಧಾನಸೌಧ ಸುತ್ತ ಸಾರ್ವಜನಿಕ ಶೌಚಾಲಯಗಳಿಲ್ಲದಿರುವುದು

ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-

644 (739) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರಿನ ಶಕ್ತಿ ಕೇಂದ್ರವಾದ ವಿಧಾನಸೌಧ, ವಿಕಾಸಸೌಧ, ಹಾಗೂ ಹೈಕೋರ್ಟ್‌ಗಳನ್ನು ವೀಕ್ಷಿಸಲು ದಿನನಿತ್ಯ ಸಾವಿರಾರು ಜನ ಪ್ರವಾಸಿಗರು ಬಂದುಹೋಗುತ್ತಿದ್ದು ಅವರೆಲ್ಲರ ಅನುಕೂಲಕ್ಕಾಗಿ ವಿಧಾನಸೌಧ ಸುತ್ತಮುತ್ತ ಸಾರ್ವಜನಿಕ ಸುಲಭ

ಶೌಚಾಲಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಾರ್ವಜನಿಕ ಶೌಚಾಲಯಗಳಿಲ್ಲದೆ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಬಗ್ಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ?